ಸಂ:ಎಎಲ್‌ಎನ್:(ಇ.ಬಿ.ಕೆ.)ಎಸ್‌ಆರ್:/ಎಸ್.ಆರ್/41/15-16

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 12-01-2016.

## ಅಧಿಕೃತ ಜ್ಞಾಪನ

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, **ಹುಸ್ಕೂರು ಗ್ರಾಮದ ಸರ್ವೆ ನಂ. 26/2 ರಲ್ಲಿ 1-11 ಎಕರೆ/ಗುಂಟೆ ವಾಸದ ಉದ್ದೇಶಕ್ಕೆ ಮತ್ತು 0-03 ಗುಂಟೆ ಉದ್ಯಾನವನ ಉದ್ದೇಶಕ್ಕೆ ಒಟ್ಟು 1-14 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ/ಉದ್ಯಾನವನ ಉದ್ದೇಶಕ್ಕಾಗಿ** ಭೂ ಪರಿವರ್ತನೆ ಕೋರಿ **ಶ್ರೀಮತಿ ಸಿ. ನಾಗರತ್ನಮ್ಮ ಕೋಂ ಆರ್. ನೀಲಕಂಠಪ್ಪ, ಹುಸ್ಕೂರು ಗ್ರಾಮ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು** ರವರು ಸಲ್ಲಿಸಿರುವ ಅರ್ಜಿ ದಿ: 24-06-2015

ಉಲ್ಲೇಖ:-
1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ.56:ಎಲ್‌ಜಿಪಿ/2008 ದಿನಾಂಕ:10-9-08 ಮತ್ತು 24-9-2008.
3. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ರವರ ವರದಿ ಸಂಖ್ಯೆ:ಎಎಲ್‌ಎನ್/(ಕಾ)/ಸಿಆರ್/47/15-16, ದಿನಾಂಕ: 20-10-2015.
4. ಭೂ ಪರಿವರ್ತನಾ ವಾಸದ ಶುಲ್ಕ ರೂ. 69,424-00 ಹಾಗೂ ಉದ್ಯಾನವನ ಶುಲ್ಕ ರೂ. 13,068-00 ಪೋಡಿ ಶುಲ್ಕ ರೂ. 55-00 ಒಟ್ಟು ರೂ. 82,547-00 ಗಳನ್ನು ಚಲನ್ ನಂ. 370 & 371 ರಂತೆ ದಿನಾಂಕ: 7-01-2016 ರಂದು ಎಸ್.ಬಿ.ಎಂ. ಕೆ.ಆರ್.ಪುರಂ ಶಾಖೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ ಹೊಸಕೋಟೆ ಯೋಜನಾ ಪ್ರಾಧಿಕಾರ, ಹೊಸಕೋಟೆ, ರವರ ಪತ್ರ ಸಂಖ್ಯೆಹೊಯೋಪ್ರಾ/ಭೂಪ.ಅ/252/15-16, ದಿನಾಂಕ:09-11-2015 ಮತ್ತು ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೆಂಗಳೂರು ರವರ ಪತ್ರ ಸಂ.ಎಸ್‌ಎಲ್‌ಎಓ/ಜಿಎಲ್/760/15-16, ದಿ: 16-11-2015.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ. 54,450-00 ಮತ್ತು ಉದ್ಯಾನವನ ರೂ.1,74,240-00 ಉದ್ದೇಶಕ್ಕೆ (ರೂಪಾಯಿಗಳು ಒಂದು ಲಕ್ಷದ ಐವತ್ನಾಲ್ಕು ಸಾವಿರದ ನಾನ್ನೂರ ಐವತ್ತು & ಒಂದು ಲಕ್ಷದ ಎಪ್ಪತ್ನಾಲ್ಕು ಸಾವಿರದ ಇನ್ನೂರ ನಲವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ, ಅರ್ಜಿದಾರರಾದ **ಶ್ರೀಮತಿ ಸಿ. ನಾಗರತ್ನಮ್ಮ ಕೋಂ ಆರ್. ನೀಲಕಂಠಪ್ಪ, ಹುಸ್ಕೂರು ಗ್ರಾಮ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು** ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, **ಹುಸ್ಕೂರು ಗ್ರಾಮದ ಸರ್ವೆ ನಂ. 26/2 ರಲ್ಲಿ 1-11 ಎಕರೆ/ಗುಂಟೆ ವಾಸದ ಉದ್ದೇಶಕ್ಕೆ ಮತ್ತು 0-03 ಗುಂಟೆ ಉದ್ಯಾನವನ ಉದ್ದೇಶಕ್ಕೆ ಒಟ್ಟು 1-14 ಎಕರೆ/ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ/ಉದ್ಯಾನವನ ಉದ್ದೇಶಕ್ಕಾಗಿ** ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಭೂ ಪರಿವರ್ತಿತ ಜಮೀನನ್ನು **ವಾಸದ/ಉದ್ಯಾನವನ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.
3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ / ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

17. ಹೊಸಕೋಟೆ ಯೋಜನಾ ಪ್ರಾಧಿಕಾರ ರವರ ದಿನಾಂಕ: 09-11-2015 ರ ಪತ್ರದಲ್ಲಿ ಸೂಚಿಸಿರುವ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಡಿಸಿದೆ.

18. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

<u>ಷೆಡ್ಯೂಲ್ ವಿವರ</u>

ಬೆಂಗಳೂರು ಜಿಲ್ಲೆ ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, **ಹುಸ್ಕೂರು ಗ್ರಾಮದ ಸರ್ವೆ ನಂ. 26/2 ರಲ್ಲಿ 1-11 ಎಕರೆ/ಗುಂಟೆ ವಾಸದ ಉದ್ದೇಶಕ್ಕೆ ಮತ್ತು 0-03 ಗುಂಟೆ ಉದ್ಯಾನವನ ಉದ್ದೇಶಕ್ಕೆ ಒಟ್ಟು 1-14 ಎಕರೆ/ಗುಂಟೆ** ಭೂ ಪರಿವರ್ತನೆ ಜಮೀನಿನ ಚಕ್ಕುಬಂದಿ:

-: ಚೆಕ್ಕುಬಂದಿ :

| | |
|---|---|
| **ಪೂರ್ವಕ್ಕೆ** | ಲಾ. ಗು. ರಸ್ತೆ |
| **ಪಶ್ಚಿಮಕ್ಕೆ** | ಲಾ. ಗು. ನಂ. 56 ರ ಜಮೀನು |
| **ಉತ್ತರಕ್ಕೆ** | ಲಾ. ಗು. ಹಿಸ್ಸೆ 26/1 ರ ಜಮೀನು |
| **ದಕ್ಷಿಣಕ್ಕೆ** | ಲಾ. ಗು. ಹಿಸ್ಸೆ 26/3 ರ ಜಮೀನು |

ಸಹಿ/-
(ವಿ. ಶಂಕರ್)
ಜಿಲ್ಲಾಧಿಕಾರಿಗಳು
ಬೆಂಗಳೂರು ಜಿಲ್ಲೆ, ಬೆಂಗಳೂರು.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ/ ಮಾಹಿತಿಗಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.</u>

1. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ಸದಸ್ಯ ಕಾರ್ಯದರ್ಶಿಗಳು, ಹೊಸಕೋಟೆ ಯೋಜನಾ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಕಂದಾಯ ಭವನ, ಬೆಂಗಳೂರು. ರವರಿಗೆ
4. ಭೂ ಮಾಪನ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳ ಕಛೇರಿ,ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪನೋಂದಣಾಧಿಕಾರಿಗಳು, ಬೊಮ್ಮನಹಳ್ಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಅರ್ಜಿದಾರರಾದ
6. ಅರ್ಜಿದಾರರಾದ **ಶ್ರೀಮತಿ ಸಿ. ನಾಗರತ್ನಮ್ಮ ಕೋಂ ಆರ್. ನೀಲಕಂಠಪ್ಪ, ಹುಸ್ಕೂರು ಗ್ರಾಮ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು** ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7. ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.